475(680) ಶ್ರೀ ಬಸವರಾಜ್ ರಾಯರೆಡ್ಡಿ (ಯಲಬುರ್ಗಾ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಸರ್ಕಾರವು ರಾಜ್ಯದ ಶಿಕ್ಷಕರುಗಳ ಗುಣಮಟ್ಟವನ್ನು ಅಭಿವೃದ್ಧಿ ಪಡಿಸಲು "Evaluation of Teacher" ಎಂಬ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆಯೇ, ಹಾಗಿದ್ದಲ್ಲಿ, ಇದನ್ನು ಜಾರಿಗೊಳಿಸಲು ಸರ್ಕಾರವು ತೆಗೆದುಕೊಂಡ ಕ್ರಮವೇನು,

ಆ) ಈ ರೀತಿ ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟು ಶಿಕ್ಷಕರ ಗುಣಮಟ್ಟವನ್ನು ಅಭಿವೃದ್ಧಿಪಡಿಸಲು ಕ್ರಮ ತೆಗೆದುಕೊಳ್ಳಲಾಗಿದೆ,

ಇ) ಇದರಿಂದ ಶಾಲೆಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳ ಗುಣಮಟ್ಟ ಉತ್ತಮವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಈ) ಬಂದಿದ್ದಲ್ಲಿ ಇದನ್ನು ಯಾವ ರೀತಿ ದೃಢಪಡಿಸಿಕೊಳ್ಳಲಾಗುತ್ತದೆ?

ಶ್ರೀ ಬಸವರಾಜ ಎನ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಹೌದು ಮೌಲ್ಯಾಂಕನದ ಫಲಿತಾಂಶವನ್ನು ಅನುಸರಿಸಿ ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಸಂಸ್ಥೆಯ (ಕೆ ಎಸ್ ಕ್ಯೂ ಎ ಓ) ಮೂಲಕ ಹಲವು ಕಾರ್ಯಕ್ರಮಗಳ ಅನುಷ್ಠಾನಗೊಳಿಸಲಾಗಿದೆ

ಆ) ಸರ್ವಶಿಕ್ಷಣ ಅಭಿಯಾನದ ವತಿಯಿಂದ ಎಲ್ಲಾ ಜಿಲ್ಲೆಗಳಲ್ಲಿ ಡಯಟ್ ಬಿ ಆರ್ ಸಿ, ಸಿ ಆರ್ ಸಿ ಗಳ ಮೂಲಕ ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರುಗಳಿಗೆ ಸೇವಾನಿರತ ತರಬೇತಿ ನೀಡಲಾಗುತ್ತಿದೆ

ಇ) ಮತ್ತು ಈ) 2007ರಲ್ಲಿ ಕೆ ಎಸ್ ಕ್ಯೂ ಎ ಓ ವತಿಯಿಂದ ಕೈಗೊಂಡಿರುವ ಮೌಲ್ಯಾಂಕನದ ಫಲಿತಾಂಶಗಳು ಬಂದಾಗ ವಿದ್ಯಾರ್ಥಿಗಳ ಗುಣಮಟ್ಟ ಉತ್ತಮವಾಗಿರುವ ಬಗ್ಗೆ ಹೋಲಿಕೆ ಮಾಡಬಹುದಾಗಿದೆ

476(358) ಶ್ರೀ ಧ್ರುವನಾರಾಯಣ (ಸಂತೇಮರಳ್ಳಿ) ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಜ್ಯದಲ್ಲಿ ಬಡ ಫಲಾನುಭವಿಗಳಿಗೆ ಆಶ್ರಯ ಅಂಬೇಡ್ಕರ್ ಇಂದಿರಾ ಆವಾಸ್ ಯೋಜನೆಯಲ್ಲಿ ಮಂಜೂರಾಗುವ ಮನೆಗಳನ್ನು ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು,

ಆ) ಈ ಮನೆಗಳನ್ನು ಕಟ್ಟಿಕೊಡಲು ಸರ್ಕಾರದ ಪರವಾಗಿ ಏಜೆನ್ಸಿ ನೇಮಕ ಮಾಡುವ ಉದ್ದೇಶ ಸರ್ಕಾರದ ಗಮನದಲ್ಲಿದೆಯೇ,

ಇ) ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು,

ಈ) 2005–06 ಮತ್ತು 2006–07ನೇ ಸಾಲಿನಲ್ಲಿ ವಿವಿಧ ಯೋಜನೆಯಿಂದ ಹಣ ಪಡೆದ ಫಲಾನುಭವಿಗಳು ಮನೆಗಳನ್ನು ಕಟ್ಟಿಕೊಡಲು ಸಾಧ್ಯವಾಗದೇ ಸರ್ಕಾರಕ್ಕೆ ಮರು ಸಂದಾಯವಾಗುತ್ತಿರುವ ಹಣವೆಷ್ಟು,

ಉ) ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಡಿ ಟಿ ಜಯಕುಮಾರ್ (ವಸತಿ ಸಚಿವರು)

ಅ) 2005–06ನೇ ಸಾಲಿನಲ್ಲಿ ಗ್ರಾಮೀಣ ಆಶ್ರಯ ಯೋಜನೆಯಡಿಯಲ್ಲಿ 226080 ಮತ್ತು ಗ್ರಾಮೀಣ ಅಂಬೇಡ್ಕರ್ ಯೋಜನೆಯಡಿಯಲ್ಲಿ 24040 ಮನೆಗಳು ಮಂಜೂರಾಗಿದ್ದು, ಗ್ರಾಮ ಪಂಚಾಯತ್ ವತಿಯಿಂದ ಕಾರ್ಯಕ್ರಮ ಅನುಷ್ಠಾನಗೊಳಿಸುತ್ತಿದ್ದು ಪ್ರಗತಿಯನ್ನು ಚುರುಕುಗೊಳಿಸಲು ಕ್ರಮ ತೆಗೆದುಕೊಳ್ಳಲಾಗಿದೆ

ಇಂದಿರಾ ಆವಾಸ್ ಯೋಜನೆಯಡಿಯಲ್ಲಿ 50136 ಮನೆಗಳು ಮಂಜೂರಾಗಿದ್ದು, ಇವುಗಳಲ್ಲಿ 30510 ಮನೆಗಳು ಪೂರ್ಣಗೊಂಡಿದ್ದು 19626 ಮನೆಗಳು ಪ್ರಗತಿಯ ವಿವಿಧ ಹಂತದಲ್ಲಿರುತ್ತವೆ

ನಗರ ಆಶ್ರಯ ಯೋಜನೆಯಡಿಯಲ್ಲಿ 50,000 ಮನೆಗಳು ಮಂಜೂರಾಗಿದ್ದು, ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಪ್ರಗತಿಯಲ್ಲಿದೆ

ರಾಜ್ಯದಲ್ಲಿ 2006–07ನೇ ಸಾಲಿನಲ್ಲಿ ಗ್ರಾಮೀಣ ಆಶ್ರಯ ಯೋಜನೆಯಡಿಯಲ್ಲಿ 340560 ಮನೆಗಳನ್ನು ಮಂಜೂರು ಮಾಡಿ ಸಂಬಂಧಪಟ್ಟ ಜಿಲ್ಲೆಗಳಿಗೆ/ ತಾಲ್ಲೂಕಿಗೆ/ ಗ್ರಾಮ ಪಂಚಾಯತಿಗಳಿಗೆ ಕಳುಹಿಸಲಾಗಿದೆ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ

ಇಂದಿರಾ ಆವಾಸ್ ಯೋಜನೆಯಡಿಯಲ್ಲಿ 53299 ಮನೆಗಳ ಮಂಜೂರಾಗಿದ್ದು, 1867 ಮನೆಗಳು ಪೂರ್ಣಗೊಂಡಿದ್ದು, 13141 ಮನೆಗಳು ಪ್ರಗತಿಯ ವಿವಿಧ ಹಂತಗಳಲ್ಲಿದ್ದು ಮತ್ತು 38291 ಮನೆಗಳು ಪ್ರಾರಂಭ–ವಾಗಬೇಕಾಗಿರುತ್ತವೆ

ಆ) ಇಲ್ಲ

ಇ) ಫಲಾನುಭವಿಗಳು ತಮ್ಮ ಮನೆಗಳನ್ನು ತಾವೇ ಸ್ವತಃ ನಿರ್ಮಿಸಿಕೊಳ್ಳಲು ಮೊದಲ ಆದ್ಯತೆ ನೀಡಲಾಗುತ್ತಿದ್ದು, ಫಲಾನುಭವಿಗಳು ಮನೆ ಕಟ್ಟಲು ಸಾಧ್ಯವಿಲ್ಲವೆಂದು ಒಪ್ಪಿಗೆ ಪತ್ರ ನೀಡಿದಲ್ಲಿ ಮಾತ್ರ ಸ್ಥಳೀಯ ಸಂಸ್ಥೆಗಳು ಏಜೆನ್ಸಿಗಳಿಗೆ ಕಾಮಗಾರಿ ಆದೇಶ ನೀಡಿ ಮನೆಗಳನ್ನು ನಿರ್ಮಿಸಲು ಅವಕಾಶ ಇರುತ್ತದೆ

ಈ) 2005–06 ಮತ್ತು 2006–07ನೇ ಸಾಲಿನಲ್ಲಿ ವಿವಿಧ ಯೋಜನೆಯಿಂದ ಹಣ ಪಡೆದ ಫಲಾನುಭವಿಗಳು ಮನೆಗಳನ್ನು ಕಟ್ಟಿಕೊಳ್ಳಲು ಸಾಧ್ಯವಾಗದೇ ಸರ್ಕಾರಕ್ಕೆ ಮರು ಸಂದಾಯ ಮಾಡಿರುವ ಪ್ರಕರಣಗಳು ಬಂದಿರುವುದಿಲ್ಲ

ಉ) ಉದ್ಭವಿಸುವುದಿಲ್ಲ

477(359) ಶ್ರೀ ಧ್ರುವನಾರಾಯಣ ಆರ್ (ಸಂತೇಮರಳ್ಳಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಕರ್ನಾಟಕ ರಾಜ್ಯದಲ್ಲಿ ಮುಂದುವರಿಕೆ ಶಿಕ್ಷಣ ಕೇಂದ್ರಗಳ ಸಂಖ್ಯೆ ಎಷ್ಟು,

ಆ) ಈ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಣ ಸಂಯೋಜಕರ ಸಂಖ್ಯೆ ಎಷ್ಟು,

ಇ) ಈ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರೇರಕ/ ಸಹ ಪ್ರೇರಕರ ಸಂಖ್ಯೆ ಎಷ್ಟು,

ಈ) ಪ್ರೇರಕ/ ಸಹ ಪ್ರೇರಕರುಗಳಿಗೆ ಎಷ್ಟು ತಿಂಗಳ ಗೌರವಧನ ಸರ್ಕಾರದಿಂದ ಪಾವತಿಯಾಗಬೇಕಾಗಿದೆ, ನಿಯಮಿತವಾಗಿ ಗೌರವಧನ ಪಾವತಿಯಾಗದಿರಲು ಕಾರಣವೇನು,

ಉ) ಇದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮವೇನು,

ಊ) ಈ ಕೇಂದ್ರಗಳಿಗೆ ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸಲು ಸೌಲಭ್ಯವಿದೆಯೇ,

ಋ) ಈ ಕೇಂದ್ರಗಳಿಗೆ ಒದಗಿಸಿರುವ ಮೂಲಭೂತ ಸೌಕರ್ಯಗಳೇನು?